**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ವಿಯೋ/ /2019-20

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001,
ದಿನಾಂಕ: 30.01.2020

**ಸುತ್ತೋಲೆ**

ವಿಷಯ: ICICI Academy for Skills ಗೆ ಬೆಂಗಳೂರು ಮತ್ತು ಮೈಸೂರು ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ ವ್ಯಾಪ್ತಿಗೆ ಒಳಪಡುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ Placement Officers ಭೇಟಿ ನೀಡುವ ಬಗ್ಗೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ICICI Academy for Skills ಸಿ.ಎಸ್.ಆರ್. ನಿಧಿಯ ವತಿಯಿಂದ ಉದ್ಯೋಗದ ತೀವ್ರ ಅಗತ್ಯವಿರುವ ಪದವೀಧರರಿಗೆ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಉದ್ಯೋಗಾಕಾಂಕ್ಷಿಗಳಾದ ಹಳೆಯ ವಿದ್ಯಾರ್ಥಿಗಳನ್ನು ಈ ತರಬೇತಿಗೆ ನೋಂದಣಿ ಮಾಡಿಸುವ ಮೂಲಕ ಹಳೆಯ ವಿದ್ಯಾರ್ಥಿಗಳ ಭವಿಷ್ಯವನ್ನು ರೂಪಿಸಲು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಸಹಕರಿಸಿದಂತಾಗುತ್ತದೆ. ಈ ಹಿನ್ನೆಲೆಯಲ್ಲಿ, ICICI Academy for Skills, ಬೆಂಗಳೂರು, ಇಲ್ಲಿ ಬೆಂಗಳೂರು ಮತ್ತು ಮೈಸೂರು ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ ವ್ಯಾಪ್ತಿಗೆ ಒಳಪಡುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ Placement Officers ಮತ್ತು ಯುವಸಬಲೀಕರಣ ಕೇಂದ್ರಗಳ ಸಮನ್ವಯಾಧಿಕಾರಿಗಳಿಗೆ ಒಂದು ದಿನದ ತರಬೇತಿಯನ್ನು ಕೆಳಕಂಡ ದಿನಾಂಕಗಳಂದು ಆಯೋಜಿಸಲಾಗಿದೆ.

ಬೆಂಗಳೂರು ವಲಯದ ಅಧಿಕಾರಿಗಳಿಗೆ ತರಬೇತಿ ದಿನಾಂಕ: 04-02-2020
ಮೈಸೂರು ವಲಯದ ಅಧಿಕಾರಿಗಳ ತರಬೇತಿ ದಿನಾಂಕ: 07-02-2020

**ICICI Academy for Skills ವಿಳಾಸ**: ICICI Bank Ltd, Mythri Center,
2nd Floor, West Wing, Next to Oxford College
Hosur Main Rod, Bengaluru-560068

ಬೆಂಗಳೂರು ಮತ್ತು ಮೈಸೂರು ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ ವ್ಯಾಪ್ತಿಗೆ ಒಳಪಡುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ Placement Officers ಮತ್ತು ಯುವಸಬಲೀಕರಣ ಕೇಂದ್ರಗಳ ಸಮನ್ವಯಾಧಿಕಾರಿಗಳು ನಿಗದಿತ ದಿನಾಂಕಗಳಂದು ಸದರಿ ತರಬೇತಿಗೆ ಹಾಜರಾಗಲು ಕ್ರಮವಹಿಸುವಂತೆ ಸೂಚಿಸಲಾಗಿದೆ.

**ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು**

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು – ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ
2. ಬೆಂಗಳೂರು ಮತ್ತು ಮೈಸೂರು ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ –ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
4. ಕಛೇರಿ ಪ್ರತಿ.